**ಜೀವಾವಧಿ ಶಿಕ್ಷೆಗೆ ಸಂಬಂಧಿಸಿದಂತೆ ಕಾನೂನು ತಿದ್ದುಪಡಿ**

704 - ಶ್ರೀ ಕೆ.ಎಸ್. ಪುಟ್ಟಣ್ಣಯ್ಯ (ಪಾಂಡವಪುರ) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 9ನೇ ಪಿಧಾನ ಸಭೆಯಲ್ಲಿ ಜೀವಾವಧಿ ಶಿಕ್ಷೆಯನ್ನು ಪಕ್ಕದ ರಾಜ್ಯಗಳಂತೆ 14 ವರ್ಷಗಳಿಂದ 10 ವರ್ಷಗಳಿಗೆ ಇಳಿಸುವಂತೆ ಸಂಬಂಧಪಟ್ಟ ಕಾನೂನನ್ನು ತಿದ್ದುಪಡಿ ಮಾಡಲಾಗಿದೆಯೇ;

ಆ) ಹಾಗಿದ್ದಲ್ಲಿ ಇಮವರೆವಿಗೂ ಜಾರಿಗೆ ತರದಿರಲು ಕಾರಣಗಳೇನು, ಎಂದಿನಿಂದ ಜಾರಿಗೆ ತರಲಾಗುವುದು?

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಗೃಹ ಸಚಿವರು) :

ಅ) ಇಲ್ಲ.

ಆ) ಜೀವಾವಧಿ ಶಿಕ್ಷೆಯನ್ನು 14 ವರ್ಷಗಳಿಂದ 10 ವರ್ಷಗಳಿಗೆ ಇಳಿಸಲು ಕರ್ನಾಟಕ ರಾಜ್ಯ ಸರ್ಕಾರದಿಂದ ಪ್ರಸ್ತಾಪಿಸಿದ ದಂಡ ಪ್ರಕ್ರಿಯೆ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕ 1992ಕ್ಕೆ ಕೇಂದ್ರ ಸರ್ಕಾರ ಅನುಮತಿ ನೀಡದೇ ಇರುವುದರಿಂದ ಸದರಿ ವಿಧೇಯಕವನ್ನು ಹಿಂದಕ್ಕೆ ಪಡೆಯಲಾಗಿದೆ.

**ವಾಣಿಜ್ಯ ತೆರಿಗೆ ಇಲಾಖೆಯ 'ಸಿ' ಮತ್ತು 'ಡಿ' ವರ್ಗಗಳ ನೌಕರರ ಬೇಡಿಕೆ ಕುರಿತು**

707 - ಶ್ರೀ ರಾಮಲಿಂಗರೆಡ್ಡಿ (ಜಯನಗರ) : ಮಾನ್ಯ ಹಣಕಾಸು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಾಣಿಜ್ಯ ತೆರಿಗೆ ಇಲಾಖೆಯಲ್ಲಿ ಕೆಲಸ ಮಾಡುತ್ತಿರುವ 'ಸಿ' ಮತ್ತು 'ಡಿ' ವರ್ಗದ ನೌಕರರ ಸಂಖ್ಯೆ ಎಷ್ಟು;

ಆ) ಈ ಇಲಾಖೆಯಲ್ಲಿ ವಿನಗೂಲಿ ಆಧಾರದ ಮೇಲೆ ಕೆಲಸ ಮಾಡುತ್ತಿರುವ ನೌಕರರ ಸಂಖ್ಯೆ ಎಷ್ಟು;

ಇ) ಈ ವಿನಗೂಲಿ ನೌಕರರನ್ನು ಸಕ್ರಮಗೊಳಿಸುವುದು 'ಡಿ' ದರ್ಜೆ ನೌಕರರಿಗೆ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳಿಗೆ ಬಡ್ತಿ ನೀಡಬೇಕೆಂಬ ಬೇಡಿಕೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ ಈ ಬೇಡಿಕೆಗಳ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಸಿದ್ದರಾಮಯ್ಯ (ಹಣಕಾಸು ಮತ್ತು ಯೋಜನಾ ಸಚಿವರು) :

ಅ) 'ಸಿ' ದರ್ಜೆ : 4756

'ಡಿ' ದರ್ಜೆ : 1346

ಒಟ್ಟು : **6102**